ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಆರೋಗ್ಯ ಇಲಾಖೆಯಲ್ಲಿ ಕೌನ್ಸ್‌ಲಿಂಗ್ ನಿಯಮಗಳನ್ನು ಉಲ್ಲಂಘಿಸಿರುವ ಕುರಿತು

ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

831 (926) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಆರೋಗ್ಯ ಇಲಾಖೆಯಲ್ಲಿ ದ್ವಿತೀಯ ದರ್ಜೆ ಸಹಾಯಕರು, ಪ್ರಥಮ ದರ್ಜೆ ಸಹಾಯಕರು, ಕಛೇರಿಯ ಅಧೀಕ್ಷಕರು ಹಾಗೂ ಸಹಾಯಕ ಆಡಳಿತಾಧಿಕಾರಿಗಳ ಹುದ್ದೆಗೆ ಇತ್ತೀಚೆಗೆ ಚಾಲ್ತಿಯಲ್ಲಿರುವ ಕೌನ್ಸ್‌ಲಿಂಗ್ ನಿಯಮಗಳನ್ನು ಉಲ್ಲಂಘಿಸಿ, ನೂರಾರು ನೌಕರರುಗಳಿಗೆ ಮಾರ್ಪಡಿಸಿದ ಪದೋನ್ನತಿ ಸ್ಥಳ ನಿಯುಕ್ತಿ ಆದೇಶಗಳನ್ನು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ಒದಗಿಸುವುದು)

(ಆ) ಈ ರೀತಿ ಯಾವ ಯಾವ ನೌಕರರುಗಳಿಗೆ ಮಾರ್ಪಡಿಸಿ ಪದೋನ್ನತಿ ಸ್ಥಳ ನಿಯುಕ್ತಿ ಆದೇಶಗಳನ್ನು ನೀಡಲಾಗಿದೆ; ಹಾಗೂ ಕೌನ್ಸಿಲಿಂಗ್ ನಿಯಮಗಳನ್ನು ಉಲ್ಲಂಘಿಸಿರುವ ಅಧಿಕಾರಿಗಳು/ ನೌಕರರುಗಳ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು; (ಸಂಪೂರ್ಣ ವಿವರ ನೀಡುವುದು)

(ಇ) ಆರೋಗ್ಯ ಇಲಾಖೆಯ ಆಹಾರ ಸುರಕ್ಷತಾ ವಿಭಾಗದಲ್ಲಿ ನೂರಾರು ವೈದ್ಯರುಗಳು ಉಪ ಆಯುಕ್ತರಾಗಿ, ಅಂಕಿತ ಅಧಿಕಾರಿಗಳಾಗಿ ಹಾಗೂ ಆಹಾರ ಸುರಕ್ಷತಾಧಿಕಾರಿಗಳಾಗಿ ಕಾರ್ಯನಿರ್ವಹಿಸುತ್ತಿದ್ದು, ಇವರುಗಳ ಸೇವೆಯನ್ನು ಆಹಾರ ಸುರಕ್ಷತಾ ವಿಭಾಗದಿಂದ ಹಿಂದಕ್ಕೆ ಪಡೆದು ಸಾರ್ವಜನಿಕ ಹಿತದೃಷ್ಟಿಯಿಂದ (ಕೋವಿಡ್-19) ಕೊರೋನಾ ಕಾರ್ಯಕ್ರಮಕ್ಕೆ ನಿಯೋಜಿಸಲು ಸರ್ಕಾರಕ್ಕೆ ಏನು ತೊಂದರೆಯಿದೆ;

(ಈ) ಆಹಾರ ಸುರಕ್ಷತಾ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವೈದ್ಯರುಗಳ ಸಂಪೂರ್ಣ ವಿವರಗಳನ್ನು ಒದಗಿಸಿ, ಈ ವೈದ್ಯರುಗಳ ಸೇವೆಯು ಇಲ್ಲಿ ಅವಶ್ಯಕವಾಗಿರುತ್ತದೆಯೇ;

(ಉ) ಆಹಾರ ಸುರಕ್ಷತಾ ವಿಭಾಗದಲ್ಲಿ ಡಿ.ಪಿ.ಎ.ಆರ್. ನಿಯಮಗಳನ್ನು ಉಲ್ಲಂಘಿಸಿ ಕಳೆದ ಐದು ವರ್ಷಗಳಿಗಿಂತಲೂ ಹೆಚ್ಚಿನ ಅವಧಿಗೆ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತಿರುವ ಅಧಿಕಾರಿಗಳ/ನೌಕರರುಗಳ ವಿವರ ಒದಗಿಸುವುದು; ಇವರುಗಳನ್ನು ಆಹಾರ ಸುರಕ್ಷತಾ ವಿಭಾಗದಲ್ಲಿ ವಿಲೀನಗೊಳಿಸಲಾ ಗುವುದೇ? (ಸಂಪೂರ್ಣ ವಿವರ ಒದಗಿಸುವುದು)